**ಶಿವಮೊಗ್ಗದ ಮೆಗ್ಗಾನ್ ಆಸ್ಪತ್ರೆ ಹೊಸಕಟ್ಟಡಗಳು**

405 (704) ಶ್ರಿ ಕೆ. ಎಸ್. ಈಶ್ವರಪ್ಪ (ಶಿವಮೊಗ್ಗ) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು. ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವಿರೆ?

1) ಶಿವಮೊಗ್ಗ ಮೇಗ್ಗಾನ್ ಆಸ್ಪತ್ರೆ ಹೊಸ ಕಟ್ಟಡಗಳು ಯಾವಾಗ ಪೂರ್ಣಗೊಳಿಸಲಾಗುವುದು?

2) ಆಸ್ಪತ್ರೆ ಅಭಿವೃದ್ದಿಗೆ ರೂ. 2 ಕೋಟಿ ಹಣ ಯಾವಾಗ ಬಿಡುಗಡೆ ಮಾಡಲಾಗುವುದು?

ಡಾ: ಹೆಚ್.ಸಿ. ಮಹದೇವಪ್ಪ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :

1) ಈ ಕಾಮಗಾರಿಯನ್ನು ಲೋಕೋಪಯೋಗಿ ಇಲಾಖಾ ವತಿಯಿಂದ ರಾಜ್ಯದ ಯೋಜನೆಯಲ್ಲಿ ಕೈಗೊಳ್ಳಲಾಗಿದ್ದು ಹಲವಾರು ಕಾರಣಗಳಿಂದ ಈ ಕಾಮಗಾರಿಯನ್ನು ಇದುವರೆವಿಗೂ ಪೂರೈಸಲು ಸಾಧ್ಯವಾಗಿಲ್ಲ. ಈ ಹೊಸ ಕಟ್ಟಡದ ಕಾಮಗಾರಿಯು ವಿಶ್ವಬ್ಯಾಂಕ್ ಯೋಜನೆಯಲ್ಲಿ ಸೇರಿಲ್ಲದೇ ಇರುವುದರಿಂದ ಈ ಕಾಮಗಾರಿಯನ್ನು ಪೂರೈಸಲು ವಿಶ್ವಬ್ಯಾಂಕ್ ಅನುಮೋದನೆಯನ್ನು ಕೋರಲು ಆಲೋಚಿಸಲಾಗಿದೆ.

2) ವಿಶ್ವಬ್ಯಾಂಕ್ ಈ ಪ್ರಸ್ತಾವನೆಗೆ ಒಪ್ಪಿದಲ್ಲಿ ಕಾಮಗಾರಿ ಪೂರೈಸಲು ಬೇಕಾಗುವ ಹಣವನ್ನು ಕೂಡಲೇ ಬಿಡುಗಡೆ ಮಾಡಲಾಗುವುದು ಹಾಗೂ ಈಗ ಅನುಮೋದಿತವಾಗಿರುವಂತೆ ವಿಶ್ವಬ್ಯಾಂಕ್ ಯೋಜನೆಯಲ್ಲಿ ಹಾಲಿ ಇರುವ ಆಸ್ಪತ್ರೆ ಹಾಗೂ ವಸತಿ ಗೃಹಗಳ ಜೀರ್ಣೋದ್ಧಾರಕ್ಕೆ 180 ಲಕ್ಷ ರೂ ಒದಗಿಸಲಾಗಿದೆ. ಈ ಕಾಮಗಾರಿಗಾಗಿ ವಿಶ್ವಬ್ಯಾಂಕ್ ನಿಯಮಗಳಿಗೆ ಅನುಗುಣವಾಗಿ ವಾಸ್ತುಶಿಲ್ಪಿಗಳಿಂದ ನಕ್ಷೆ ತಯಾರಿಸಲಾಗುತ್ತಿದ್ದು ವಿಶ್ವಬ್ಯಾಂಕ್ ವಾಸ್ತುಶಿಲ್ಪಿಗಳ ಒಪ್ಪಿಗೆ ಪಡೆದ ನಂತರ ಟೆಂಡರ್ ಕರೆದು ಕಾಮಗಾರಿಯನ್ನು ಕೈಗೊಳ್ಳಲಾಗುವುದು.

**ಮೊಳಕಾಲ್ಮೂರಿನಲ್ಲಿರುವ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಕುರಿತು**

406 (674) ಶ್ರೀ ಎನ್. ವೈ. ಗೋಪಾಲಕೃಷ್ಣ (ಮೊಳಕಾಲ್ಮೂರು) : ಮಾನ್ಯ ಪ್ರಾಥಮಿಕ, ಪ್ರೌಢ ಹಾಗೂ ಉನ್ನತ ಶಿಕ್ಷಣ ಸಚಿವರು. ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವಿರೆ?

1) ಮೊಳಕಾಲ್ಮೂರಿನಲ್ಲಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜನ್ನು ಯಾವಾಗ ಪ್ರಾರಂಭಿಸಲಾಯಿತು?

2) ಈ ಕಾಲೇಜಿಗೆ ವಿವಿಧ ವಿಭಾಗಗಳಲ್ಲಿ ಮಂಜುರಾಗಿರುವ ಉಪನ್ಯಾಸಕರ ಹುದ್ದೆಗಳೆಷ್ಟು?

3) ಈ ಪೈಕಿ ಯಾವ ಯಾವ ವಿಭಾಗಗಳಲ್ಲಿ ಉಪನ್ಯಾಸಕರು ಕೆಲಸ ನಿರ್ವಹಿಸುತ್ತಿದ್ದರು?

4) ಖಾಲಿ ಇರತಕ್ಕ ಉಪನ್ಯಾಸಕರ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು?

ಶ್ರೀ ಹೆಚ್. ಜಿ. ಗೋವಿಂದೇಗೌಡ (ಪ್ರಾಥಮಿಕ, ಪ್ರೌಢ ಹಾಗೂ ಉನ್ನತ ಶಿಕ್ಷಣ ಸಚಿವರು)

1) 1985 ರಲ್ಲಿ